# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

**ದಿನಾಂಕ: 04.09.2021 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು**

**ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎಸ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡೆಲ್ ಅಧಿಕಾರಿ | ಹಾಜರಿದ್ದರು |
| 2 | ಎಸ್. ಜಿ. ಉಮೇಶ್ | ಸಹಾಯಕ ಅಭಿಯಂತರರು | ಸದಸ್ಯರು | ಹಾಜರಿದ್ದರು |
| 3 | ಡಾ|| ಹರ್ಷಿತ್ | ಕೋವಿಡ್ ವೈದ್ಯಾಧಿಕಾರಿಗಳು | ಸದಸ್ಯರು | ಹಾಜರಿದ್ದರು |
| 4 | ಸುಜಾತಾ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 5 | ಗೋವಿಂದರಾಜು ಕೆ. | ಕಂದಾಯ ವಸೂಲಿಗಾರರು ಸ.ಕಂ.ಅ. (ಯಶವಂತಪುರ) | ಸದಸ್ಯರು | ಹಾಜರಿದ್ದರು |
| 6 | ಚನ್ನೇಶಪ್ಪ | ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ | ಸದಸ್ಯರು | ಹಾಜರಿದ್ದರು |
| 7 | ಅನಿಲ್ ಕುಮಾರ್ ಎಂ. | ಸಹಾಯಕ ಅಭಿಯಂತರರು, ಬೆಸ್ಕಾಂ | ಸದಸ್ಯರು | ಹಾಜರಿದ್ದರು |
| 8 | ಸುಜಾತಾ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 9 | ಸತ್ಯವತಿ | ಲಿಂಕ್ ವರ್ಕರ್ | ಸದಸ್ಯರು | ಹಾಜರಿದ್ದರು |
| 10 | ಶಿವಪ್ರಕಾಶ್ ಎಂ. | ಬಿ.ಎಲ್.ಒ. ಹೋಂ ಐಸೋಲೇಷನ್ ಟೀಂ | ಸದಸ್ಯರು | ಹಾಜರಿದ್ದರು |
| 11 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 12 | ಬಿ. ಜಾನ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

1) ಸಾರ್ವಜನಿಕ ಶೌಚಾಲಯಗಳ ಬಗ್ಗೆ:-

ಪ್ರಸ್ತಾಪಿತ ವಿಷಯದ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಒಳಪಡುವ ಎಲ್ಲಾ ಪ್ರದೇಶಗಳಲ್ಲಿ ಸರ್ವೆ ಕಾರ್ಯ ಕೈಗೊಂಡು, ಸಾರ್ವಜನಿಕರ ಅಭಿಪ್ರಾಯ ಪಡೆದು, ಹಾಲಿ ಇರುವ ಸಾರ್ವಜನಿಕ ಶೌಚಾಲಯಗಳ ಸ್ಥಿತಿಗತಿ ಬಗ್ಗೆ ಪರಿವೀಕ್ಷಣೆ ಮಾಡಿ, ಅಗತ್ಯವಿದ್ದಲ್ಲಿ ಹೊಸ ಶೌಚಾಲಯಗಳನ್ನು ನಿರ್ಮಿಸಿಕೊಡುವ ಬಗ್ಗೆ ಮುಂದಿನ ಸಭೆಯಲ್ಲಿ ವರದಿ ಸಲ್ಲಿಸಲಾಗುವುದು ಎಂದು ಅಧ್ಯಕ್ಷರ ಅವಗಾಹನೆಗೆ ಮಂಡಿಸಿದರು.

2) ಆರೋಗ್ಯ ಇಲಾಖೆ:-

ವೈದ್ಯಾಧಿಕಾರಿಗಳು ಡಾ॥ ಹರ್ಷಿತ್‌ರವರು ಮಾತನಾಡಿ, ಕಂಪ್ಯೂಟರ್ ಆಪರೇಟರ್ ರವರಿಗೆ ವೇತನ ಪಾವತಿ ಮಾಡಿರುವುದಿಲ್ಲ. ಇದರ ಬಗ್ಗೆ ಸಂಬಂಧಪಟ್ಟ ಆರೋಗ್ಯಾಧಿಕಾರಿಗಳು, ಬಿಬಿಎಂಪಿರವರು ಕ್ರಮ ವಹಿಸಿರುವುದಿಲ್ಲ, ಆದ್ದರಿಂದ ಕೂಡಲೇ ವೇತನ ಮಾಡಲು ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರನ್ನು ಕೋರಿದರು.

ರೈಲ್ವೆ ನಿಲ್ದಾಣದಲ್ಲಿ ಕೋವಿಡ್ ಟೆಸ್ಟ್ ಮಾಡಲು ರೈಲ್ವೆ ನಿಲ್ದಾಣದ ಮುಂಭಾಗ ಪ್ರತಿ ದಿನ ಸ್ವ್ಯಾಬ್ ಕಲೆಕ್ಟರ್ಸ್ ಕಾರ್ಯನಿರ್ವಹಿಸುತ್ತಿರುತ್ತಾರೆ. ಸದರಿ ಸ್ಥಳದಲ್ಲಿ ಕೋವಿಡ್ ಟೆಸ್ಟ್ ಮಾಡಲು ರೈಲ್ವೆ ಅಧಿಕಾರಿಗಳು ಪ್ರತಿ ತಿಂಗಳು ಪ್ರತ್ಯೇಕವಾಗಿ ಅನುಮತಿ ಪತ್ರ ಪಡೆಯಲು ಸೂಚಿಸಿರುತ್ತಾರೆ. ವೈದ್ಯಾಧಿಕಾರಿಗಳು ಅಧ್ಯಕ್ಷರೊಂದಿಗೆ ಮಾತನಾಡಿ, ಪ್ರತಿ ತಿಂಗಳು ಪ್ರತ್ಯೇಕವಾಗಿ ಅನುಮತಿ ಪಡೆಯುವ ಬದಲಿಗೆ ಖಾಯಂ ಆಗಿ ರೈಲ್ವೆ ನಿಲ್ದಾಣದಲ್ಲಿ ಕೋವಿಡ್ ಟೆಸ್ಟ್ ಮಾಡಲು ರೈಲ್ವೆ ಇಲಾಖೆಯಿಂದ ಅನುಮತಿ ದೊರಕಿಸಿಕೊಡಲು ಕೋರಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೋವಿಡ್ ವೈದ್ಯರಿಗೆ ಪ್ರತಿ ಮಾಹೆಯ ಪೇ ಸ್ಲಿಪ್‌ಗಳನ್ನು ಹಾಗೂ ಗುರುತಿನ ಚೀಟಿಯನ್ನು ನೀಡಲು ಸಂಬಂಧಪಟ್ಟವರಿಗೆ ಸೂಚನೆ ನೀಡಲು ವೈದ್ಯಾಧಿಕಾರಿಗಳು ಅಧ್ಯಕ್ಷರಲ್ಲಿ ಕೋರಿದರು.

3) ಪೌರ ಕಾರ್ಮಿಕರ ಬಗ್ಗೆ:

ವಾರ್ಡ್‌ಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಪ್ರತಿ ತಿಂಗಳು ಪೇಸ್ಲಿಪ್‌ನ್ನು ನೀಡಲು, ಪೇಪರ್‌ಗಳನ್ನು ನೀಡದ್ದರೂ ಸಹ ಪೇಸ್ಲಿಪ್‌ನ್ನು ನೀಡಿರುವುದಿಲ್ಲ. ಆದ್ದರಿಂದ ಪ್ರತಿ ತಿಂಗಳು ಪೇಸ್ಲಿಪ್‌ನ್ನು ನೀಡಲು ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಲ್ಲಿ ಕೋರಿದರು. ಹಾಗೂ ಲಕ್ಷ್ಮಿ, ಪೌರ ಕಾರ್ಮಿಕರ ವೇತನ ಪಾವತಿಯಾಗಿರುವುದಿಲ್ಲ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ, ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಕ್ರಮವಹಿಸಲು ಸೂಚಿಸುವುದಾಗಿ ತಿಳಿಸಿದರು.

**4) ಕಸದ ವಿಲೇವಾರಿ ಬಗ್ಗೆ:**

ವಾರ್ಡ್‌ನ ವಿವಿಧ ಭಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್‌ಗಳು ಹೆಚ್ಚಾಗುತ್ತಿರುವುದನ್ನು ತಡೆಯುವ ಸಲುವಾಗಿ, ಬ್ಲ್ಯಾಕ್‌ಸ್ಪಾಟ್‌ಗಳಲ್ಲಿ ಕಸ ಹಾಕುವವರಿಗೆ ದಂಡವಿಧಿಸುವ ಬಗ್ಗೆ ನಾಮಫಲಕ ಅಳವಡಿಸಲು ಕೋರಿದ್ದು, ಇದರ ಬಗ್ಗೆ ಅಧ್ಯಕ್ಷರು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕ್ರಮವಹಿಸಲು ಸೂಚಿಸಿದರು.

ಹಸಿ ಕಸ ಹಾಗೂ ಒಣ ಕಸವನ್ನು ವಿಂಗಡಿಸಿ, ಆಟೋರಿಕ್ಷಾಗಳಿಗೆ ಕೊಡಲು, ಧ್ವನಿವರ್ಧಕಗಳ ಮೂಲಕ ಸಾರ್ವಜನಿಕರಿಗೆ ಜನಜಾಗೃತಿ ಮೂಡಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯದ ಗುತ್ತಿಗೆದಾರರಿಗೆ ಅಧ್ಯಕ್ಷರು ಸೂಚಿಸಿದರು.

ಕೇಶವ ಚಿತ್ರಮಂದಿರದ ಹತ್ತಿರ ಕಸದ ಪಾಯಿಂಟ್ ಇದ್ದು, ಕಸದ ಪಾಯಿಂಟ್‌ನ್ನು ತೆರವುಗೊಳಸಲು ಸಾರ್ವಜನಿಕರು ಮನವಿ ಮಾಡಿರುತ್ತಾರೆ. ಮೇಲ್ವಿಚಾರಕರಾದ ಜಾನ್ ಮಾತನಾಡಿ, ಬದಲಿ ವ್ಯವಸ್ಥೆ ಇಲ್ಲದಿರುವ ಕಾರಣ ಯಥಾಸ್ಥಿತಿ ಮುಂದುವರೆಸುವುದು ಅನಿವಾರ್ಯವೆಂದು ತಿಳಿಸಿದರು.

**5) ಕಂದಾಯ ಇಲಾಖೆ:**

ಹಿಂದೆ ಚರ್ಚಿಸಿದಂತೆ, ಹೊಸದಾಗಿ ಮತದಾರರ ಗುರುತಿನ ಚೀಟಿ, ಸ್ಮಾರ್ಟ್ ಕಾರ್ಡ್ ಪಡೆಯುವವರಿಗೆ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು, ಧ್ವನಿವರ್ಧಕವಿರುವ ಆಟೋಗಳಲ್ಲಿ ಪ್ರಚಾರ ಮಾಡಲು ಕಂದಾಯ ಇಲಾಖೆಯವರಿಗೆ ಸೂಚಿಸಲಾಯಿತು.

**6) ಬಿಡಬ್ಲ್ಯೂಎಸ್‌ಎಸ್‌ಬಿ :**

ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್‌ಗಳಿಂದ ತೆಗೆದ ಹೂಳನ್ನು ಸಂಬಂಧಪಟ್ಟ ಗುತ್ತಿಗೆದಾರರು ಅಲ್ಲಿಯೇ ಹಾಕಿರುವುದನ್ನು ಗಮನಿಸಲಾಗಿದ್ದು, ನಂತರದ ದಿನಗಳಲ್ಲಿ ಸದರಿ ಹೂಳನ್ನು ತೆಗೆಯುವುದಾಗಿ ಹೇಳಿದ್ದರೂ ಸಹ ಇದುವರೆಗೂ ಕ್ರಮ ತೆಗೆದುಕೊಳ್ಳದೇ ಇರುವುದರಿಂದ ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುವ ದೂರಿರುವ ಅನ್ವಯ ಸಂಬಂಧಪಟ್ಟ ಸಹಾಯಕ ಇಂಜಿನಿಯರ್‌ಗೆ ಸಭೆಯಲ್ಲಿ ಹೂಳನ್ನು ಕೂಡಲೇ ತೆಗೆಯಲು ಸೂಚನೆ ನೀಡಲಾಯಿತು.

**7) ಬೆಸ್ಕಾಂ ಇಲಾಖೆ:**

ಬಿಬಿಎಂಪಿ ಹೆರಿಗೆ ಆಸ್ಪತ್ರೆ ಹಾಗೂ ವ್ಯಾಯಾಮ ಶಾಲೆ ಹತ್ತಿರ ದುರಸ್ತಿಗೊಳಗಾದ ಹಾಗೂ ಅನುಪಯುಕ್ತ ವಿದ್ಯುತ್ ಕಂಬಗಳನ್ನು ಸಂಬಂಧಪಟ್ಟ ಇಲಾಖೆ ನೌಕರರು ತೆರವುಗೊಳಸಲು ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ಉಮೇಶ್)
ಸಹಾಯಕ ಕಾರ್ಯಪಾಲಕ ಅಭಿಯಂತರರು
ವಾರ್ಡ್ ನೋಡಲ್ ಅಧಿಕಾರಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ವಾರ್ಡ್ ಸಂಖ್ಯೆ:37